ಅಧ್ಯಾಯ - III

ಆಯೋಗದ ಪ್ರಕಾರ್ಯಗಳು ಮತ್ತು ಅಧಿಕಾರಗಳು

9. ಆಯೋಗದ ಪ್ರಕಾರ್ಯಗಳು : (1) ಆಯೋಗದ ಪ್ರಕಾರ್ಯಗಳು ಈ ಮುಂದಿನಂತಿರತಕ್ಕದ್ದು, ಎಂದರೆ :

(i) ನಾಗರೀಕರ ಯಾವುದೇ ವರ್ಗವನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಬೇಕೆಂದು ಬಂದ ಕೋರಿಕೆಗಳನ್ನು ಪರಿಶೀಲಿಸುವುದು ಮತ್ತು ಯಾವುದೇ ಹಿಂದುಳಿದ ವರ್ಗವನ್ನು ಅಂಥ ಪಟ್ಟಿಯಲ್ಲಿ ಹೆಚ್ಚಾಗಿ ಸೇರಿಸಲಾಗಿದೆ ಎಂದು ಅಥವಾ ಸೇರಿಸಲಾಗಿಲ್ಲವೆಂದು ಬಂದ ದೂರುಗಳ ವಿಚಾರಣೆ ಮಾಡುವುದು ಮತ್ತು ಸರ್ಕಾರಕ್ಕೆ ಅದು ಸಮುಚಿತವೆಂದು ಭಾವಿಸುವಂಥ ಸಲಹೆಯನ್ನು ನೀಡಬಹುದು.

(ii) ಹಿಂದುಳಿದ ವರ್ಗಗಳಿಗೆ ಸೇರಿದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಬಗ್ಗೆ ಸರ್ವೆ ಮಾಡುವುದು.

(iii) ಹಿಂದುಳಿದ ವರ್ಗಗಳಿಗಾಗಿ ಇರುವ ಅನೇಕ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ಮೇಲ್ವಿಚಾರಣೆ ಮಾಡುವುದು.

(2)ಆಯೋಗವು ನೀಡುವ ಸಲಹೆಗಳಿಗೆ ಸರ್ಕಾರವು ಸಾಮಾನ್ಯವಾಗಿ ಬದ್ಧವಾಗಿರತಕ್ಕದ್ದು.

10. ಆಯೋಗದ ಅಧಿಕಾರಗಳು : ಆಯೋಗವು 9ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಅದರ ಪ್ರಕಾರ್ಯಗಳನ್ನು ನಿರ್ವಹಿಸುವಾಗ, ಒಂದು ದಾವೆಯನ್ನು ವಿಚಾರಣೆ ಮಾಡುವಾಗ ಮತ್ತು ವಿಶೇಷವಾಗಿ ಈ ಮುಂದಿನ ವಿಷಯಗಳಿಗೆ ಸಂಬಂಧಪಟ್ಟಂತೆ ಸಿವಿಲ್ ನ್ಯಾಯಾಲಯವು ಹೊಂದಿರುವ ಎಲ್ಲ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ,

(ಎ) ರಾಜ್ಯದ ಯಾವುದೇ ಭಾಗದಿಂದ ಯಾರೇ ವ್ಯಕ್ತಿಯನ್ನು ಸಮನು ಮಾಡುವುದು ಮತ್ತು ಅವನ ಹಾಜರಾತಿಯನ್ನು ಒತ್ತಾಯಪಡಿಸುವುದು ಮತ್ತು ಪ್ರಮಾಣ ಮಾಡಿಸುವ ಮೂಲಕ ಅವನನ್ನು ಪರೀಕ್ಷಿಸುವುದು ;

(ಬಿ) ಯಾವುದೇ ದಾಖಲೆಗಳನ್ನು ಶೋಧಿಸುವುದನ್ನು ಮತ್ತು ಹಾಜರುಪಡಿಸುವುದನ್ನು ಅಗತ್ಯಪಡಿಸುವುದು ;

(ಸಿ) ಅಫಿಡವಿಟ್ಟುಗಳ ಮೂಲಕ ಸಾಕ್ಷ್ಯವನ್ನು ಸ್ವೀಕರಿಸುವುದು ;

(ಡಿ) ಯಾವುದೇ ನ್ಯಾಯಾಲಯ ಅಥವಾ ಕಚೇರಿಯಿಂದ ಯಾವುದೇ ಸರ್ಕಾರಿ ದಾಖಲೆ ಅಥವಾ ಅದರ ಪ್ರತಿಯನ್ನು ನೀಡುವಂತೆ ಅಗತ್ಯಪಡಿಸತಕ್ಕದ್ದು ;

(ಇ) ಸಾಕ್ಷಿಗಳ ಮತ್ತು ದಸ್ತಾವೇಜುಗಳ ಪರೀಕ್ಷೆಗಾಗಿ ಕಮೀಷನ್ನುಗಳನ್ನು ಹೊರಡಿಸುವುದು, ಮತ್ತು

(ಎಫ್) ನಿಯಮಿಸಬಹುದಾದಂಥ ಇತರ ಯಾವುದೇ ವಿಷಯ

11. ರಾಜ್ಯ ಸರ್ಕಾರದಿಂದ ಪಟ್ಟಿಗಳ ನಿಯತಕಾಲಿಕ ಪುನರೀಕ್ಷಣೆ : (1) ರಾಜ್ಯ ಸರ್ಕಾರವು ಯಾವುದೇ ಸಮಯದಲ್ಲಿ ಮತ್ತು ಈ ಅಧಿನಿಯಮವು ಜಾರಿಗೆ ಬಂದ ದಿನಾಂಕದಿಂದ ಮತ್ತು ಹತ್ತು ವರ್ಷಗಳ ಅವಧಿಯು ಮುಕ್ತಾಯವಾದಾಗ ಮತ್ತು ಅದರ ನಂತರ ಬರುವ ಹತ್ತು ವರ್ಷಗಳ ಅವಧಿ ಮುಕ್ತಾಯವಾಗುವಾಗ ಹಿಂದುಳಿದ ವರ್ಗಗಳಾಗಿರುವುದು ನಿಂತಹೋಗಿರುವ ವರ್ಗಗಳನ್ನು ತೆಗೆದುಹಾಕುವ ಅಥವಾ ಹೊಸ ಹಿಂದುಳಿದ ವರ್ಗಗಳನ್ನು ಅಂಥ ಪಟ್ಟಿಯಲ್ಲಿ ಸೇರಿಸುವುದನ್ನು ಗಮನದಲ್ಲಿರಿಸಿಕೊಂಡು ಪಟ್ಟಿಗಳನ್ನು ಪುನರೀಕ್ಷಿಸತಕ್ಕದ್ದು.

(2) ರಾಜ್ಯ ಸರ್ಕಾರವು (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಪುನರೀಕ್ಷಣೆಯನ್ನು ಕೈಗೊಳ್ಳುವಾಗ ಆಯೋಗದ ಸಲಹೆಯನ್ನು ಪಡೆಯತಕ್ಕದ್ದು.

ಅಧ್ಯಾಯ - IV

ಹಣಕಾಸು, ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ

12.ರಾಜ್ಯ ಸರ್ಕಾರದಿಂದ ಅನುದಾನಗಳು : ಈ ಅಧಿನಿಯಮದ ಉದ್ದೇಶಗಳಿಗಾಗಿ ಬಳಸಲು ರಾಜ್ಯ ಸರ್ಕಾರವು ಯುಕ್ತವೆಂದು ಭಾವಿಸುವಂಥ ಹಣದ ಮೊತ್ತವನ್ನು ಅನುದಾನಗಳ ಮೂಲಕ ಆಯೋಗಕ್ಕೆ ಈ ಪರವಾಗಿ ಕಾನೂನಿನ ಮೂಲಕ ರಾಜ್ಯ ವಿಧಾನ ಮಂಡಲವು ಧನವಿನಿಯೋಗ ಮಾಡಿದ ನಂತರ, ನೀಡತಕ್ಕದ್ದು.

(2) ಆಯೋಗವು ಅಂಥ ಮೊತ್ತವನ್ನು ಈ ಅಧಿನಿಯಮದ ಅಡಿಯಲ್ಲಿನ ಪ್ರಕಾರ್ಯಗಳನ್ನು ನೆರವೇರಿಸಲು ತಾನು ಸೂಕ್ತವೆಂದು ಭಾವಿಸುವ ರೀತಿಯಲ್ಲಿ ಖರ್ಚು ಮಾಡಬಹುದು ಮತ್ತು ಅಂಥ ಮೊತ್ತಗಳನ್ನು (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿರುವ ಅನುದಾನಗಳಿಂದ ಸಂದಾಯ ಮಾಡಬಹುದಾದ ವೆಚ್ಚವೆಂದು ಪರಿಗಣಿಸತಕ್ಕದ್ದು.

13. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ : (1) ಆಯೋಗದ ಆದಾಯ ಮತ್ತು ವೆಚ್ಚಗಳನ್ನು ನಿಯಮಿಸಬಹುದಾದಂಥ ನಿಯಮಗಳಿಗನುಸಾರವಾಗಿ ಇಡತಕ್ಕದ್ದು.

(2) ಆಯೋಗವು ನಿಯಮಿಸಬಹುದಾದಂಥ ನಮೂನೆಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರವನ್ನು ತಯಾರಿಸತಕ್ಕದ್ದು.

(3) ಆಯೋಗದ ಲೆಕ್ಕಪತ್ರಗಳನ್ನು ವಾರ್ಷಿಕವಾಗಿ ರಾಜ್ಯ ಸರ್ಕಾರವು ನೇಮಕ ಮಾಡಬಹುದಾದಂಥ ಲೆಕ್ಕ ಪರಿಶೋಧಕನಿಂದ ಲೆಕ್ಕ ಪರಿಶೋಧನೆ ಮಾಡಿಸತಕ್ಕದ್ದು.

(4) ಲೆಕ್ಕ ಪರಿಶೋಧಕನಿಗೆ, ಲೆಕ್ಕಪರಿಶೋಧನೆಯ ಉದ್ದೇಶಕ್ಕಾಗಿ ಆಯೋಗದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ಪಡೆಯಲು ಅವಕಾಶವಿರತಕ್ಕದ್ದು.

(5)ನಿಯಮಿಸಬಹುದಾದಂತೆ ಲೆಕ್ಕ ಪರಿಶೋಧನೆಯ ಅಂಥ ವೆಚ್ಚಗಳನ್ನು ಆಯೋಗವು ತನ್ನ ಅನುದಾನದಿಂದ ಸಂದಾಯ ಮಾಡತಕ್ಕದ್ದು.

(6) ಲೆಕ್ಕ ಪರಿಶೋಧಕನ ವರದಿಯನ್ನು ಸ್ವೀಕರಿಸಿದ ನಂತರ ಆದಷ್ಟು ಬೇಗನೆ ಆಯೋಗವು ಲೆಕ್ಕಪತ್ರಗಳ ವಾರ್ಷಿಕ ವಿವರವನ್ನು ಲೆಕ್ಕ ಪರಿಶೋಧಕನ ವರದಿಯ ಪ್ರತಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ನಿಯಮಿಸಬಹುದಾದ ಅಂಥ ರೀತಿಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರವನ್ನು ಪ್ರಕಟಿಸುವಂತೆ ಮಾಡತಕ್ಕದ್ದು.

(7) ರಾಜ್ಯ ಸರ್ಕಾರವು ಲೆಕ್ಕ ಪರಿಶೋಧಕನ ವರದಿಯನ್ನು ಅವಗಾಹಿಸಿದ ನಂತರ ಅದು ಉಚಿತವೆಂದು ಭಾವಿಸುವಂಥ ನಿರ್ದೇಶನಗಳನ್ನು ಆಯೋಗಕ್ಕೆ ನೀಡಬಹುದು ಮತ್ತು ಆಯೋಗವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

14. ವಾರ್ಷಿಕ ವರದಿ : ಪ್ರತಿ ಹಣಕಾಸು ವರ್ಷಕ್ಕಾಗಿ ಆಯೋಗವು ಹಿಂದಿನ ವರ್ಷದಲ್ಲಿ ಅದರ ಕಾರ್ಯಚಟುವಟಿಕೆಯ ಬಗ್ಗೆ ಪೂರ್ಣ ಮಾಹಿತಿಯನ್ನು ನೀಡುವ ಅದರ ವಾರ್ಷಿಕ ವರದಿಯನ್ನು ನಿಯಮಿಸಬಹುದಾದಂತೆ ಅಂಥ ನಮೂನೆ ಮತ್ತು ಅಂಥ ಸಮಯದಲ್ಲಿ ತಯಾರಿಸತಕ್ಕದ್ದು ಎತ್ತು ಅದರ ಒಂದು ಪ್ರತಿಯನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.